# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 255 (1843)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು )

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ವಿಷಯ : ಸಮಾನ ಕೆಲಸಕ್ಕೆ ಸಮಾನ ವೇತನ ನೀಡುವ ಕುರಿತು

(ಅ) ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಂಪ್ಯೂಟರ್ ಆಪರೇಟರ್, ವಾಹನ ಚಾಲಕರು ಮತ್ತು ಗ್ರೂಪ್-ಡಿ ನೌಕರರಿಗೆ ಸಮಾನ ಕೆಲಸಕ್ಕೆ ಸಮಾನ ವೇತನವನ್ನು ನೀಡಲಾಗುತ್ತಿದ್ದು, ಅದೇ ರೀತಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಕರ್ತವ್ಯ ನಿರ್ವಹಿಸುತ್ತಿರುವ ಕಂಪ್ಯೂಟರ್ ಆಪರೇಟರ್, ವಾಹನ ಚಾಲಕರು ಮತ್ತು ಗ್ರೂಪ್-ಡಿ ನೌಕರರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ನೀಡುವ ವಿಚಾರ ಸರ್ಕಾರದ ಗಮನದಲ್ಲಿದೆಯೇ;

(ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಿದೆ?